ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH
ಪತ್ರಿಕಾ ತುಣುಕುಗಳು
PAPER CLIPPINGS
ದಿನಾಂಕ : DATE :
ಶಾಖೆ / ವಿಷಯ: DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER :

### ಎಚ್ಚರ ವಹಿಸದಿದ್ದರೆ ತೆರಬೇಕಿದೆ ಭಾರಿ ದಂಡ

# ಮೋಟಾರು ವಾಹನ ತಿದ್ದುಪಡಿ ಮಸೂದೆಗೆ ಸಂಸತ್ ಸಮ್ಮತಿ

**ದೆಹಲಿ:** ಹಿಂದೆಂದಿಗಿಂತ ವಾಹನ ಸವಾರರು ಈಗ ಅತಿ ಹೆಚ್ಚು ಎಚ್ಚರ ವಹಿಸಬೇಕಾಗಿದೆ. ಇಲ್ಲದಿದ್ದರೆ ಭಾರಿ ದಂಡ ತೆರಬೇಕಾಗುತ್ತದೆ.

ರಸ್ತೆ ಸುರಕ್ಷತೆ ಹೆಚ್ಚಿಸುವ ಉದ್ದೇಶದ ಮೋಟಾರು ವಾಹನ (ತಿದ್ದುಪಡಿ) ಮಸೂದೆ 2019ಕ್ಕೆ ಸಂಸತ್ತು ಅನುಮೋದಿಸಿದ್ದು, ಸಂಚಾರ ನಿಯಮ ಉಲ್ಲಂಘನೆಗೆ ಭಾರಿ ದಂಡ ತೆರಬೇಕಾಗುತ್ತದೆ.

ಸೀಟ್ ಬೆಲ್ಟ್, ಹೆಲ್ಮೆಟ್ ಇಲ್ಲ ಅಂದ್ರೆ 1,000 ರು. ದಂಡ 3 ತಿಂಗಳವರೆಗೆ ಚಾಲನ ಪರವಾನಗಿ ರದ್ದು ಮಾಡುವಂತಹ, ಕುಡಿದು ವಾಹನ ಚಲಾಯಿಸಿದರೆ 6 ತಿಂಗಳ ಜೈಲು ಶಿಕ್ಷೆ ನೀಡುವ ಪ್ರಸ್ತಾವಗಳನ್ನು ತಿದ್ದುಪಡಿ ಮಸೂದೆ ಹೊಂದಿದೆ. ಮಸೂದೆಗೆ ಲೋಕಸಭೆಯು ಕಳೆದ ವಾರ ಒಪ್ಪಿಗೆ ಕೊಟ್ಟಿತ್ತು. ರಾಜ್ಯಸಭೆಯಲ್ಲಿ ಮಸೂದೆ ಪರ 108 ಮತ್ತು ವಿರುದ್ಧ 13 ಮತಗಳು ಚಲಾವಣೆಯಾದವು.

ರಾಜ್ಯಸಭೆಯಲ್ಲಿ ಎನ್‌ಡಿಎಗೆ ಬಹುಮತವಿಲ್ಲದಿದ್ದರೂ, ಕೆಲವು ವಿರೋಧ ಪಕ್ಷಗಳನ್ನು ವಿಶ್ವಾಸಕ್ಕೆ ತೆಗೆದುಕೊಂಡ ಸರಕಾರವು ಮಸೂದೆ ಅಂಗೀಕಾರ ಆಗುವಂತೆ ನೋಡಿಕೊಂಡಿದೆ. ಮಸೂದೆಯನ್ನು ರಾಜ್ಯಸಭೆಯ ಪರಿಶೀಲನಾ ಸಮಿತಿಗೆ ಒಪ್ಪಿಸಬೇಕು ಎಂಬ ವಿರೋಧ ಪಕ್ಷಗಳ ಒತ್ತಾಯವನ್ನು ಸರಕಾರ ತಿರಸ್ಕರಿಸಿದೆ. ತೆರಿಗೆ ಸಂಗ್ರಹದ ವಿಚಾರದಲ್ಲಿ ರಾಜ್ಯಗಳ ಅಧಿಕಾರವನ್ನು ಈ ಮಸೂದೆಯು ಕಸಿದುಕೊಳ್ಳುತ್ತದೆ. ಹಾಗಾಗಿ, ಮಸೂದೆಯ ವಿವರವಾದ ಪರಿಶೀಲನೆ ಅಗತ್ಯ. ಹಾಗೆಯೇ, ಮಸೂದೆಯು ಪ್ರಾದೇಶಿಕ ಸಾರಿಗೆ ಪ್ರಾಧಿಕಾರದ ಅಧಿಕಾರಗಳನ್ನು ಖಾಸಗಿ ಕಂಪನಿಗಳಿಗೆ ನೀಡುತ್ತದೆ ಎಂದು ವಿರೋಧ ಪಕ್ಷಗಳು ಪ್ರತಿಪಾದಿಸಿದವು. ಆದರೆ, ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಅವರು ಈ ಅಂಶಗಳನ್ನು ಅಲ್ಲಗಳೆದರು. ರಾಜ್ಯಗಳ ಅಧಿಕಾರದಲ್ಲಿ ಹಸ್ತಕ್ಷೇಪ ಮಾಡುವುದಿಲ್ಲ ಎಂದರು.

ಮಸೂದೆಯಲ್ಲಿ ಕೆಲವು ಬದಲಾವಣೆಗಳನ್ನು ಮಾಡಿಕೊಳ್ಳಲಾಗಿದೆ. ಹಾಗಾಗಿ ಮಸೂದೆಗೆ ಲೋಕಸಭೆಯಲ್ಲಿ ಮತ್ತೊಮ್ಮೆ ಅನುಮತಿ ಪಡೆದುಕೊಳ್ಳಬೇಕಾಗಿದೆ.

ಲೋಕಸಭೆಯಲ್ಲಿ ಅಂಗೀಕಾರ ಆಗಿರುವ ಮಸೂದೆಗೆ ಕೆಲವು ಬದಲಾವಣೆ ಮಾಡಿ ರಾಜ್ಯಸಭೆಯಲ್ಲಿ ಮಂಡಿಸಲಾಗಿದೆ ಎಂದು ಕಾಂಗ್ರೆಸ್‌ನ ಬಿ.ಕೆ. ಹರಿಪ್ರಸಾದ್ ಆಕ್ಷೇಪ ವ್ಯಕ್ತಪಡಿಸಿದರು. ಲೋಕಸಭೆಯಲ್ಲಿ ಅಂಗೀಕಾರ ಆದ ಅದೇ ಮಸೂದೆ ಯನ್ನು ರಾಜ್ಯಸಭೆಯಲ್ಲಿ ಮಂಡಿಸಲಾಗಿದೆ ಎಂದು ಗಡ್ಕರಿ ಆರಂಭದಲ್ಲಿ ಪ್ರತಿಪಾದಿಸಿದರು. ಲೋಕಸಭೆಯಲ್ಲಿ ಮಂಡಿಸಲಾದ ಮಸೂದೆಯಲ್ಲಿ ಕೆಲವು ಮುದ್ರಣ ದೋಷಗಳಿದ್ದವು. ಹಾಗಾಗಿ ಅವುಗಳಿಗೆ ತಿದ್ದುಪಡಿ ಮಾಡಲಾಗಿದೆ ಎಂದು ಬಳಿಕ ಹೇಳಿದರು. ಮಸೂದೆಗೆ ಕಾಂಗ್ರೆಸ್ ಬೆಂಬಲ ಕೊಟ್ಟಿತು.

## ಪ್ರಸ್ತಾವಗಳು



- ಸರಕು ಸಾಗಾಟ ಮತ್ತು ಪ್ರಯಾಣಿಕರ ಸಂಚಾರ ವ್ಯವಸ್ಥಿತಗೊಳಿಸಲು ಮಾರ್ಗದರ್ಶಿ ಸೂತ್ರ ರಚನೆ
- ಸಂಚಾರ ನಿಯಮ ಉಲ್ಲಂಘನೆ ದಂಡ ಭಾರಿ ಪ್ರಮಾಣದಲ್ಲಿ ಏರಿಕೆ
- ಚಾಲನೆ ಕಲಿಕಾ ಪರವಾನಗಿ ನೀಡಲು ಆನ್ಲೈನ್ ವ್ಯವಸ್ಥೆ
- ಅಪಘಾತ ಸಂತ್ರಸ್ತರಿಗೆ ಮತ್ತು ಅವರ ಕುಟುಂಬದವರಿಗೆ ವಿಮಾ ಪರಿಹಾರ ತ್ವರಿತಕ್ಕೆ ಕ್ರಮ
- ಅಪಘಾತ ಸಂದರ್ಭದಲ್ಲಿ ನೆರವಾದವರಿಗೆ ರಕ್ಷಣೆ
- ಚಾಲನಾ ಪರವಾನಗಿ ಅವಧಿ ಮುಕ್ತಾಯದ ಬಳಿಕ ನವೀಕರಣದ ಗಡುವು ಒಂದು ತಿಂಗಳಿನಿಂದ ಒಂದು ವರ್ಷಕ್ಕೆ ಏರಿಕೆ

## ನಿಯಮ ಉಲ್ಲಂಘನೆ, ದಂಡಗಳು

| ನಿಯಮಗಳು | ಹಳೆಯ ಕ್ರಮ | ಪರಿಷ್ಕೃತ ಕ್ರಮ |
|---|---|---|
| ರಸ್ತೆ ನಿಯಮ ಉಲ್ಲಂಘನೆ | 100 | 500 |
| ಟಿಕೆಟ್ ರಹಿತ ಪ್ರಮಾಣ | 200 | 500 |
| ಅಧಿಕಾರಿಗಳ ನಿಯಮ ಉಲ್ಲಂಘನೆ | 500 | 2000 |
| ನೋಂದಣಿಯಿಲ್ಲದ ವಾಹನದೊಂದಿಗೆ ಲೈಸನ್ಸ್ ರಹಿತ ಚಾಲನೆ ವಯೋಮಿತಿಯೊಳಗಿನ ಚಾಲನೆ | 500 | 10,000 |
| ಆ್ಯಂಬುಲೆನ್ಸ್‌ಗೆ ದಾರಿ ಬಿಡದಿದ್ದರೆ | - | 10,000 |
| ಕುಡಿದು ಚಾಲನೆ | 2000 | 10,000<br>6 ತಿಂಗಳು ಜೈಲು |
| ಅತಿವೇಗ/ರೇಸಿಂಗ್ | 500 | 5000 |
| ಪರ್ಮಿಟ್ ಇಲ್ಲದ ವಾಹನ | 5000 | 10,000 |
| ವಿಮೆ ಇಲ್ಲದ ಡ್ರೈವಿಂಗ್ | 1000 | 2000 |
| ಹೆಲ್ಮೆಟ್ ಧರಿಸದೆ ಡ್ರೈವಿಂಗ್ | 100 | 1000 |
| ಸಿಗ್ನಲ್ ಜಂಪ್, ಚಾಲನೆ ವೇಳೆ ಮೊಬೈಲ್ ಬಳಕೆ | 5000 | 6 - 12 ತಿಂಗಳು ಜೈಲು |